**ದಿನಾಂಕ: 05-12-2020 ರಂದು ಮಧ್ಯಾಹ್ನ 3:00 ಗಂಟೆಗೆ ವಾರ್ಡ್ ಸಂಖ್ಯೆ 167 ಯಡಿಯೂರು ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

*ಹಾಜರಿದ್ದ ಅಧಿಕಾರಿಗಳು:-*

1. ಡಾ॥ ರಾಘವೇಂದ್ರ ಪ್ರಸಾದ್ – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ಯತೀಶ್.ಎ.ಜೆ – ಸಹಾಯಕ ಅಭಿಯಂತರರು ಮತ್ತು ಸಂಚಾಲಕರು (ವಾರ್ಡ್ 167 ಯಡಿಯೂರು)
3. ಶ್ರೀ. ಮಂಜುನಾಥ್. ಆರ್ – ಹಿ.ಆ.ಪ– (ವಾರ್ಡ್ 167 ಯಡಿಯೂರು)
4. ಶ್ರೀ. ನರಸಿಂಹಲು – ಕಿ.ಆ.ಪ– (ವಾರ್ಡ್ 167 ಯಡಿಯೂರು)

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 167 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ವಾರ್ಡ್ ಸಮಿತಿ ಸಭೆಯಲ್ಲಿ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ವಾರ್ಡ್ ವ್ಯಾಪ್ತಿಯ ಜಲಮಂಡಳಿ, ಬೆಸ್ಕಾಂ, ಘನತ್ಯಾಜ್ಯ ವಿಲೇವಾರಿ, ಆರೋಗ್ಯ ಇಲಾಖೆ, ಕಂದಾಯ, ಕಾಮಗಾರಿ ಇಲಾಖೆಗಳಿಗೆ ಸಂಬಂಧಿಸಿದಂತೆ ಪ್ರಸ್ತುತ ಇರುವ ಸಮಸ್ಯೆಗಳು ಹಾಗೂ ಪರಿಹಾರೋಪಾಯಗಳು ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ವಾರ್ಡ್ ವ್ಯಾಪ್ತಿಯಲ್ಲಿ ಕಳೆದ 15 ದಿನಗಳಿಂದ ಸ್ವೀಕೃತವಾಗಿರುವ ಅಂತರ್ಜಾಲ ದೂರುಗಳು, ಲಿಖಿತ ದೂರುಗಳು ಹಾಗೂ ಸಾರ್ವಜನಿಕರ ಮೌಖಿಕ ದೂರುಗಳು ಹಾಗೂ ಇನ್ನಿತರೆ ಸ್ಥಳೀಯ ಸಂಸ್ಥೆಗಳಿಂದ ದೂರುಗಳನ್ನು ಕಾಲಕಾಲಕ್ಕೆ ಪರಿಹಾರ ಮಾಡಲಾಗಿರುವ ಬಗ್ಗೆ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಿಗೆ ವಿವರಿಸಲಾಯಿತು.

ಹಿಂದಿನ ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಪ್ರಸ್ತುತ ಕಂಡುಬಂದಿರುವ ಕೋವಿಡ್-19 ರೋಗಿಗಳ ವಿವರಗಳನ್ನು ವಾರ್ಡ್‌ನ ಹಿರಿಯ ಆರೋಗ್ಯ ಪರಿವೀಕ್ಷಕರಿಂದ ಪಡೆದು ಸದರಿ ರೋಗದ ಹರಡುವಿಕೆಯನ್ನು ತಡೆಗಟ್ಟುವ ಸಂಬಂಧ ಕೈಗೊಳ್ಳಲಾಗುತ್ತಿರುವ ಕ್ರಮಗಳ ಕುರಿತು ಚರ್ಚಿಸಿದ್ದರ ಮೇರೆಗೆ ಕೋವಿಡ್-19 ಟೆಸ್ಟಿಂಗ್ ಕಾರ್ಯವನ್ನು ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚುವರಿಯಾಗಿ ಕೈಗೊಳ್ಳಲು ಕ್ರಮ ವಹಿಸಲಾಗಿರುತ್ತದೆ.

ಪ್ರತೀ ಬುಧವಾರ ಮತ್ತು ಶನಿವಾರ ವಾರ್ಡ್ ವ್ಯಾಪ್ತಿಯ ಎಲ್ಲಾ ಬ್ಲಾಕ್ ಸ್ಪಾಟ್‌ಗಳಲ್ಲಿ ಹೆಚ್ಚಿನ ಸಂಪನ್ಮೂಲ ಕ್ರೂಢಿಕರಿಸಿಕೊಂಡು ಬೆಳಗ್ಗೆ 11:30 ಕ್ಕೆ ಸಾಮೂಹಿಕ ಸ್ವಚ್ಚತಾ ಕಾರ್ಯವನ್ನು ಕೈಗೊಳ್ಳಲು ಸೂಚಿಸಲಾಯಿತು.

ಶ್ರೀ. ಮಂಜುನಾಥ್, ಸದಸ್ಯರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲಾ ರೀತಿಯ ಮೂಲಭೂತ ಸೌಕರ್ಯ ಒದಗಿಸುವ ನಿಟ್ಟಿನಲ್ಲಿ ಅಧಿಕಾರಿಗಳ ಶ್ರಮ ಹಾಗೂ ತುರ್ತು ಸ್ಪಂದನೆ ಬಗ್ಗೆ ಮೆಚ್ಚುಗೆ ವ್ಯಕ್ತ ಪಡಿಸಿದರು.

ವಾರ್ಡಿನಲ್ಲಿ ರಸ್ತೆಗುಂಡಿಗಳ ಬಗ್ಗೆ ಚರ್ಚಿಸಲಾಗಿ ಹೊಸದಾಗಿ ಗುರುತಿಸಲಾದ ರಸ್ತೆಗುಂಡಿಗಳನ್ನು ಜಲಮಂಡಳಿ ಅಗೆತಗಳು ಹಾಗೂ ಇನ್ನಿತರೆ ಅಗೆತಗಳಿಗೆ ಸಂಬಂಧಪಟ್ಟಿರುವುದರಿಂದ ರಸ್ತೆಗುಂಡಿಗಳನ್ನು ಮುಚ್ಚಲು ಅಗತ್ಯಕ್ರಮ ಕೈಗೊಳ್ಳುವ ಬಗ್ಗೆ ಅಧ್ಯಕ್ಷರು ರವರು ತುರ್ತಾಗಿ ನಿರ್ವಹಿಸಲು ಜಲಮಂಡಳಿ ಅಧಿಕಾರಿಗಳಿಗೆ ಸೂಚಿಸಲಾಯಿತು.

ವಾರ್ಡ್ ವ್ಯಾಪ್ತಿಯಲ್ಲಿ ಹೊಸದಾಗಿ ಗುರುತಿಸಲಾಗಿದ್ದ ರಸ್ತೆ ಗುಂಡಿಗಳನ್ನು ಸಮರ್ಪಕವಾಗಿ ಮುಚ್ಚಿರುವ ಬಗ್ಗೆ ಸಹಾಯಕ ಅಭಿಯಂತರರು, ಅಧ್ಯಕ್ಷರು ಹಾಗೂ ಸದಸ್ಯರುಗಳಿಗೆ ವಿವರಿಸಲಾಗಿ ಸಮಿತಿಯ ಸದಸ್ಯರುಗಳು ಸಹ ಸದರಿ ಕಾರ್ಯದ ಯಶಸ್ಸಿನ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು.

ಜಯನಗರ 6ನೇ ಬ್ಲಾಕ್ ವೆಲ್ಫೇರ್ ಅಸೋಸಿಯೇಶನ್ ವತಿಯಿಂದ ಶ್ರೀ. ಕುಮಾರ್ ರವರು ಮಾತನಾಡಿ ವಾರ್ಡ್ ಸಂಖ್ಯೆ 167 ರಲ್ಲಿನ ಎಲ್ಲಾ ಭಾಗಗಳ ಘನತ್ಯಾಜ್ಯ ವಿಲೇವಾರಿ ಕಾರ್ಯ, ಸಿವಿಲ್ ಕಾಮಗಾರಿಗಳು ಹಾಗೂ ಇನ್ನಿತರೆ ಕೆಲಸ ಕಾರ್ಯಗಳು ಸಮರ್ಪಕವಾಗಿ ನಡೆಯುತ್ತಿದ್ದು ಮುಂದಿನ ದಿನಗಳಲ್ಲಿ ಇದೇ ರೀತಿ ಮುಂದುವರೆಸುವಂತೆ ಅಭಿಪ್ರಾಯಿಸಿದರು.

ಮೇಲಿನ ವಿಷಯಗಳ ಬಗ್ಗೆ ಶ್ರೀ. ಯತೀಶ್. ಎ.ಜೆ ರವರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿನ ಮೂಲಭೂತ ಸೌಕರ್ಯಗಳಾದ ರಸ್ತೆಗುಂಡಿ ಮುಚ್ಚುವಿಕೆ, ಕಟ್ಟಡ ತ್ಯಾಜ್ಯ ವಿಲೇವಾರಿ, ಘನತ್ಯಾಜ್ಯ ವಿಲೇವಾರಿ, ಬೆಸ್ಕಾಂ ಸಂಬಂಧಿತ, ಜಲಮಂಡಳಿ ಸಂಬಂಧಿತ, ಆರೋಗ್ಯ ಇಲಾಖೆ ಹಾಗೂ ಇನ್ನಿತರೆ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಸಮರ್ಪಕ ಕಾರ್ಯನಿರ್ವಹಣೆಯ ಬಗ್ಗೆ ಆಯಾ ಇಲಾಖೆಗಳ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸದಸ್ಯರಿಗೆ ಮತ್ತು ಅಧ್ಯಕ್ಷರಿಗೆ ವಿವರಿಸಿದರು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಡಾ॥ ರಾಘವೇಂದ್ರ ಪ್ರಸಾದ್ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ 167